# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ, ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 13 /2022-23 ದಿನಾಂಕ: 05.07.2022

## ದಿನಾಂಕ-05.07.2022 ರಂದು ನಡೆದಿರುವ ವಿಜಿನಾಪುರ ವಾರ್ಡ್ ಸಂಖ್ಯೆ-51 ರ ವಾರ್ಡ್ ಸಮಿತಿ ಸಭೆ ನಡುವಳಿಗಳು

| | ಸದಸ್ಯರ ಹೆಸರು ಮತ್ತು ಪದನಾಮ | ಸದಸ್ಯರ ಹಾಜರು/ಗೈರು ಹಾಜರು |
|---|---|---|
| 1 | ಶ್ರೀಮತಿ.ತ್ರಿವೇಣಿ (ಅಧ್ಯಕ್ಷರು) | ಹಾಜರು |
| 2 | ಶ್ರೀ.ನಾಗಭೂಷಣ, ಸಹಾಯಕ ಅಭಿಯಂತರರು (ವಾರ್ಡ್ ನಂ.51) (ಕಾರ್ಯದರ್ಶಿ) | ಹಾಜರು |
| 3 | | ಹಾಜರು |
| 4 | ಶ್ರೀ.ಮಧು (ಕಿ.ಆ.ಪ) ವಾರ್ಡ್ ನಂ.51 | ಹಾಜರು |
| 5 | ಶ್ರೀ.ಸಂಜೀವಯ್ಯ (ಪಿ.ಎಸ್.ಐ, ಟ್ರಾಫಿಕ್) | ಹಾಜರು |
| 6 | ಶ್ರೀ.ಡಿ.ವಿ.ಮೋಹನ್ ಲೈವ್ ಸ್ಟಾಕ್ ಆಫೀಸರ್ | ಹಾಜರು |
| 7 | ಶ್ರೀ.ರಾಮಚಂದ್ರ (ಅಂಬೇಡ್ಕರ್ ನಗರ) | ಹಾಜರು |
| 8 | ಶ್ರೀ.ಶಿವರಾಮನ್ (ಬಿ.ಡಿ.ಎ ಲೇಔಟ್) | ಹಾಜರು |
| 9 | ಶ್ರೀ.ದೇವರಾಜ್ (ಅಂಬೇಡ್ಕರ್ ನಗರ) | ಹಾಜರು |
| 10 | ಶ್ರೀ.ಪುಷ್ಪರಾಜು (ಸದಸ್ಯರು) | ಹಾಜರು |
| 11 | ಶ್ರೀ.ಅಭಿಲಾಷ್ ಜಿ ನಾಯರ್ | ಹಾಜರು |
| 12 | ಶ್ರೀ.ಬೇಬಿ ಜಿ.ಆರ್ (ಮಾರ್ಷಲ್) | ಹಾಜರು |
| 13 | ಶ್ರೀಮತಿ.ಆರ್.ಲಕ್ಷ್ಮಿ (ಬೆಸ್ಕಾಂ) ಕಿರಿಯ ಅಭಿಯಂತರರು, ಇ-10 | ಹಾಜರು |

ದಿನಾಂಕ-05-07-2022 ರಂದು ಪೂರ್ವಾಹ್ನ 11.30 ಗಂಟೆ ಸಮಯದಲ್ಲಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯನದಾಗಿ ಶ್ರೀಮತಿ.ತ್ರಿವೇಣಿ ಅಧ್ಯಕ್ಷರು ರವರು ಸಭೆಯಲ್ಲಿ ಹಾಜರಿರುವ ಸದಸ್ಯರುಗಳು ಮತ್ತು ಅಧಿಕಾರಿ ವೃಂಧದವರಿಗೆಲ್ಲಾ ಸ್ವಾಗತಕೋರಿದರು. ತದನಂತರ ಈ ಕೆಳಕಂಡ ವಿಷಯಗಳ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ.ಅಭಿಲಾಷ್ ಜಿ.ನಾಯರ್ ರವರು ಮಾತನಾಡಿ ವಿಜಿನಾಪುರ ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಬ್ಲಾಕ್ ಸ್ಪಾಟ್‌ಗಳಲ್ಲಿ ಸಾರ್ವಜನಿಕರು ಕಸವನ್ನು ಬಿಸಾಡುತ್ತಿರುತ್ತಾರೆ. ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಸದರಿ ಬ್ಲಾಕ್ ಸ್ಪಾಟ್‌ಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಸ್ಥಳದಲ್ಲೇ ದಂಡ ವಿಧಿಸಿ, ತಿಳುವಳಿಕೆ ಹೇಳಿ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು.

<u>ಕ್ರಮ:-</u> ಸಭೆಯಲ್ಲಿ ಹಾಜರಿದ್ದ ಮಾರ್ಷಲ್ ಮತ್ತು ಆರೋಗ್ಯ ನಿರೀಕ್ಷಕರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

2. ಶ್ರೀ.ಪುಷ್ಪರಾಜ್, ಸದಸ್ಯರು ರವರು ಮಾತನಾಡಿ ಕೋವಿಡ್ ಸಂಬಂಧಿಸಿದಂತೆ ಕೋವಿಡ್ ಸೋಂಕಿಗೆ ಒಳಗಾಗಿ ಮೃತ ಪಟ್ಟವರಿಗೆ ತುರ್ತಾಗಿ ಪರಿಹಾರ ಧನವನ್ನು ಬಿಡುಗಡೆಗೊಳಿಸಿ ಕೊಡಬೇಕೆಂದು ಸಭೆಯಲ್ಲಿ ಕೋರಿದ್ದು, ಮತ್ತು ಆರ್.ಆರ್ ಲೇಔಟ್ 2ನೇ ಅಡ್ಡರಸ್ತೆಯಲ್ಲಿ ಹಾಗೂ ಎಸ್.ಪಿ.ನಾಯ್ಡು ಲೇಔಟ್ ಮುಖ್ಯರಸ್ತೆಯಲ್ಲಿ ಕೆ.ಇ.ಬಿ ವಿದ್ಯುತ್ ಕಂಬಗಳು ನಡುರಸ್ತೆಯಲ್ಲಿ ಇರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು.

ಕ್ರಮ:- ಸಂಬಂಧಪಟ್ಟ ಕೆ.ಇ.ಬಿ ಮತ್ತು ಆರೋಗ್ಯ ನಿರೀಕ್ಷಕರಿಗೆ ಅಗತ್ಯ ಕ್ರಮ ವಹಿಸಲು ಸಭೆಯು ಸೂಚಿಸಿತು.

3. ಶ್ರೀ.ದೇವರಾಜ್ ಅಂಬೇಡ್ಕರ್ ನಗರ ರವರು ಮಾತನಾಡುತ್ತಾ, ಅಂಬೇಡ್ಕರ್ ನಗರ ರಾಜಕಾಲುವೆಗಳಲ್ಲಿ ಹೂಳು ತುಂಬಿದ್ದು, ನೀರು ಸರಾಗವಾಗಿ ಹರಿಯದೇ ಮಳೆಗಾಲದಲ್ಲಿ ಮಳೆಬಂದಾಗ ಮನೆಗಳಿಗೆ ನೀರು ನುಗ್ಗುವ ಸಂಭವವಿರುವುದರಿಂದ ಸದರಿ ರಾಜಕಾಲುವೆಯ ಹೂಳನ್ನು ತೆಗೆಯಲು ಸಭೆಯಲ್ಲಿ ಕೋರಿದರು. ಹಾಗೂ ಎಫ್.ಸಿ.ಐ ಗೋಡೌನ್ ರಸ್ತೆಯಲ್ಲಿರುವ ಗ್ರಂಥಾಲಯ ಕಟ್ಟಡಕ್ಕೆ ನೀರಿನ ಸಂಪರ್ಕ ಇಲ್ಲದೇ ಇರುವುದರಿಂದ ಸದರಿ ಗ್ರಂಥಾಲಯಕ್ಕೆ ನೀರಿನ ಸಂಪರ್ಕವನ್ನು ನೀಡಲು ಕೋರಿದರು.
<u>ಕ್ರಮ:-</u> ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮ ವಹಿಸಲು ಸಭೆಯು ಸೂಚಿಸಿತು.

4. ಶ್ರೀ.ಶಿವರಾಮನ್ ರವರು ಮಾತನಾಡಿ ಬಿ.ಡಿ.ಎ ಲೇಔಟ್‌ನ ರಸ್ತೆಗಳಲ್ಲಿ ಬೀದಿ ದೀಪಗಳು ಉರಿಯದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.
ಕ್ರಮ:- ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಅಧ್ಯಕ್ಷರು ರವರು ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯ ಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ಸಭೆಗೆ ಹಾಜರಾಗದ ಅಧಿಕಾರಿಗಳ ವಿರುದ್ಧ ಅಸಮಧಾನ ವ್ಯಕ್ತಪಡಿಸಿ ಮುಂದಿನ ಸಭೆಯಲ್ಲಿ ಎಲ್ಲರೂ ಹಾಜರಾಗಲೂ ಕ್ರಮಕೈಗೊಳ್ಳಲು ಕೋರಿಕೊಂಡಿದ್ದು, ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಕಾರ್ಯದರ್ಶಿಗಳು, 5/7/22
ವಾರ್ಡ್ ನಂ.51, ವಿಜಿನಾಪುರ